ಆ) ಉದ್ಭವಿಸುವುದಿಲ್ಲ.

ಮಲೆನಾಡು ಅಭಿವೃದ್ಧಿ ಮಂಡಳಿಯ ಕಾರ್ಯಾಚರಣೆಯಲ್ಲಿ ವಿಳಂಬ

833 - ಶ್ರೀ ಯು.ಕೆ. ಶಾಮಣ್ಣ (ಶೃಂಗೇರಿ) : ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :

ಅ) *ಅತ್ಯಾವಶ್ಯಕವಾಗಿ ಬೇಕಾದ ಮಲೆನಾಡು ಅಭಿವೃದ್ಧಿ ಮಂಡಳಿಯ ಕಾರ್ಯಾಚರಣೆಯು ತಡವಾಗಲು ಕಾರಣವೇನು?*

ಆ) *ಈ ಸಾಲಿನ ಅಭಿವೃದ್ಧಿ ಕಾರ್ಯಕ್ಕೆ ಆಯವ್ಯಯದಲ್ಲಿಟ್ಟಿರುವ ಹಣವನ್ನು ಮಂಜೂರು ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ?*

ಶ್ರೀ ಎಂ. ವೀರಪ್ಪ ಮೊಯ್ಲಿ (ಮುಖ್ಯ ಮಂತ್ರಿಗಳು);

ಅ) ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯು ಶೀಘ್ರದಲ್ಲಿ ರಚನೆಯಾಗಲಿದೆ.

ಆ) ಈ ಸಾಲಿನ ಆಯವ್ಯಯದಲ್ಲಿರುವ ಹಣವನ್ನು ಮಂಡಳಿಗೆ ಬಿಡುಗಡೆ ಮಾಡಲಾಗುತ್ತಿದೆ.

ಗತಿ ಪ್ರದೇಶಗಳ ಅಭಿವೃದ್ಧಿ ಕಾರ್ಯನಿಮಿತ್ತ ಕೈಗೊಂಡ ಕಾಮಗಾರಿಗಳು.

1024 - ಶ್ರೀ ಮನೋಹರ ಐನಾಪುರ್, (ಬೆಳ್ಳೋಳ್ಳಿ) : ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

ಅ) *ಗಡಿ ಪ್ರದೇಶಗಳ ಅಭಿವೃದ್ಧಿ ಕಾರ್ಯಕ್ರಮದಡಿ 1989-90ನೇ ಸಾಲಿನಿಂದ ತೆಗೆದುಕೊಳ್ಳಲಾಗಿರುವ ಕಾಮಗಾರಿಗಳು*

ಆ) *ಗಡಿ ಕ್ಷೇತ್ರಗಳ ಅಭಿವೃದ್ಧಿಗೋಸ್ಕರ ಸರ್ಕಾರವು ಆಯವ್ಯಯದಲ್ಲಿ ಹೆಚ್ಚು ಹಣವನ್ನು ಒದಗಿಸುವ ಯೋಜನೆ ಇದೆಯೇ?*

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು):

ಅ) ಗಡಿ ಪ್ರದೇಶಗಳ ಅಭಿವೃದ್ಧಿ ಕಾರ್ಯಕ್ರಮಗಳಡಿಯಲ್ಲಿ ರಸ್ತೆ ಮತ್ತು ಸೇತುವೆಗಳು, ಶಿಕ್ಷಣ ಆರೋಗ್ಯ ಪಶುವೈದ್ಯ ಸೇವೆಗಳು, ಗ್ರಾಮೀಣ ವಿದ್ಯುದ್ದೀಕರಣ ಮತ್ತು ಗ್ರಾಮೀಣ ನೀರು ಪೂರೈಕೆ ಮತ್ತು ನೈರ್ಮಲ್ಯ ಇವೇ ಮೊದಲಾದ ಆದ್ಯತೆ ವಲಯಗಳಲ್ಲಿ 1990-91ನೇ ಸಾಲಿನಿಂದ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗುತ್ತಿದೆ.ಈ ಕಾರ್ಯಕ್ರಮಗಳನ್ನು ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಮುಖಾಂತರ ಕಾರ್ಯಗತಗೊಳಿಸಲಾಗುತ್ತಿದೆ.

ಆ) ಮುಂಬರುವ ಸಾಲಿನ (1993-94) ಆಯವ್ಯಯದಲ್ಲಿ ಒದಗಿಸಬಹುದಾದ ಹಣದ ಬಗ್ಗೆ ಈಗಲೇ ತಿಳಿಸುವುದು ಅನುಚಿತವಾಗುತ್ತದೆ.

ಚನ್ನಪಟ್ಟಣದಲ್ಲಿ ಅಗ್ನಿಶಾಮಕ ಠಾಣೆಯ ಮಂಜೂರು

1050 - ಶ್ರೀ ಸಾದತ್ ಅಲಿ ಖಾನ್, (ಚನ್ನಪಟ್ಟಣ) : ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

ಅ) *ಚನ್ನಪಟ್ಟಣದಲ್ಲಿ ಒಂದು ಅಗ್ನಿಶಾಮಕ ಠಾಣೆಯು 1990-91ನೇ ಸಾಲಿನಲ್ಲಿ ಮಂಜೂರಾಗಿರುವುದು ನಿಜವೇ?*

ಆ) *ಹಾಗಿದ್ದಲ್ಲಿ ಚನ್ನಪಟ್ಟಣ ವ್ಯವಸಾಯ ಉತ್ಪನ್ನ ಮಾರುಕಟ್ಟೆ ಸಮಿತಿಯವರು ಅಗತ್ಯವಿರುವ ಜಮೀನನ್ನು ನೀಡಿದ್ದರೂ ಸಹ ಕಟ್ಟಡ ಕೆಲಸವನ್ನು ಪ್ರಾರಂಭ ಮಾಡದಿರುವುದಕ್ಕೆ ಕಾರಣಗಳೇನು?*

ಇ) *ಸದರಿ ಕಟ್ಟಡದ ಕೆಲಸವನ್ನು ಎಂದು ಪ್ರಾರಂಭ ಮಾಡಲಾಗುವುದು?*